# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 733
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 13.07.2023
4. ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಅವ್ಯಾಹತವಾಗಿ ನಡೆಯುತ್ತಿರುವುದು ಹಾಗೂ ಇದರಿಂದಾಗಿ ಹಲವಾರು ಬಾರಿ ಕಾನೂನು ಸುವ್ಯವಸ್ಥೆಗೆ ಭಂಗ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದಲ್ಲಿ ಡ್ರಗ್ಸ್ ಮಾರಾಟ ದಂಧೆ ಕುರಿತಾಗಿ ಎನ್.ಡಿ.ಪಿ.ಎಸ್ ಕಾಯ್ದೆ, 1985ರ ಅಡಿಯಲ್ಲಿ ಪ್ರಕರಣಗಳು ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದ್ದು, ಇದರಿಂದ ಕಾನೂನು ಸುವ್ಯವಸ್ಥೆಗೆ ಭಂಗ ಉಂಟಾಗಿರುವುದಿಲ್ಲ. |
| ಆ) | ಬಂದಿದ್ದಲ್ಲಿ, ಡ್ರಗ್ಸ್ ಮಾರಾಟ ದಂಧೆಯನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ರಾಜ್ಯದಲ್ಲಿ ಡ್ರಗ್ಸ್ ಮಾರಾಟವನ್ನು ನಿಯಂತ್ರಿಸಲು ಸರ್ಕಾರವು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:<br>1. ಸಾರ್ವಜನಿಕರ ಅನುಕೂಲಕ್ಕಾಗಿ ಮಾದಕ ವಸ್ತು ಮಾರಾಟ ಮತ್ತು ಸೇವನೆ ಮಾಡುವವರ ವಿರುದ್ಧ ದೂರು ನೀಡಲು ಟೋಲ್ ಫ್ರೀ ಸಂಖ್ಯೆ **1908**ನ್ನು ಸ್ಥಾಪಿಸಿದ್ದು, ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾಹಿತಿ ನೀಡುವ ಯೋಜನೆಯನ್ನು ಪ್ರಾರಂಭಿಸಲಾಗಿದೆ.<br>2. ಮಾದಕ ವಸ್ತುಗಳ ಮಾರಾಟ ಜಾಲವನ್ನು ಪತ್ತೆಹಚ್ಚಿ ಅವರ ಮೊಬೈಲ್ ಸಿ.ಡಿ.ಆರ್. ಅನ್ನು ವಿಶ್ಲೇಷಿಸಿ ಮಾದಕ ವಸ್ತುಗಳ ಮಾರಾಟದ ಮೂಲದ ಬಗ್ಗೆ ಮಾಹಿತಿ ಸಂಗ್ರಹಿಸಿ ಕ್ರಮ ಜರುಗಿಸಲಾಗುತ್ತಿದೆ.<br>3. ಬಾರ್ ಮತ್ತು ರೆಸ್ಟೋರೆಂಟ್, ಕಾಫಿ–ಡೇ, ಪಬ್, ಮುಂತಾದ ಕಡೆ ಯುವಕರು ಹೆಚ್ಚಾಗಿ ಸೇರುವ ಸ್ಥಳಗಳು, ಶಾಲಾ ಕಾಲೇಜು ಆವರಣ, ಬಸ್ ನಿಲ್ದಾಣ ಹಾಗೂ ಇನ್ನಿತರೆ ಪ್ರದೇಶಗಳಲ್ಲಿ ಮಾದಕ ದ್ರವ್ಯ ವಸ್ತುಗಳನ್ನು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ ಕಾನೂನಿನ ರೀತಿ ಕ್ರಮ ಜರುಗಿಸಲಾಗುತ್ತಿದೆ.<br>4. ಸಾರ್ವಜನಿಕರ ಗಮನ ಸೆಳೆಯಲು ಬ್ಯಾನರ್, ಪೋಸ್ಟರ್‌ಗಳನ್ನು ಜನಸಂದಣಿ ಇರುವ ಸ್ಥಳಗಳಲ್ಲಿ ಪ್ರದರ್ಶಿಸಿ ಕರಪತ್ರ ಹಂಚಲಾಗುತ್ತಿದೆ. ಮಾದಕ ವಸ್ತುಗಳ ಸೇವನೆಯಿಂದಾಗುವ ದುಷ್ಪರಿಣಾಮಗಳ ಬಗ್ಗೆ ಸಾಮಾಜಿಕ ಜಾಲ ತಾಣಗಳಲ್ಲಿ ಚುಟುಕ ವಿಡಿಯೋಗಳ ಮೂಲಕ ದುಷ್ಪರಿಣಾಮಗಳ ಬಗ್ಗೆ ಅರಿವು ಮತ್ತು ಜಾಗೃತಿ ಸಹ ಮೂಡಿಸಲಾಗುತ್ತಿದೆ. |

| | | |
|---|---|---|
| | | 5. ಶಾಲಾ ಕಾಲೇಜುಗಳು, ವಿದೇಶಿಯರು ವಾಸಿಸುತ್ತಿರುವ ಪ್ರದೇಶಗಳು ಮತ್ತು ಕೊಳಚೆ ಪ್ರದೇಶಗಳಲ್ಲಿ ಸಾರ್ವಜನಿಕ ಸಭೆ, ಮೆರವಣಿಗೆಗಳನ್ನು ನಡೆಸುವುದರ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಲಾಗುತ್ತಿದೆ.<br>6. ಮಾದಕ ವಸ್ತುಗಳ ಮಾರಾಟ/ಸೇವನೆಯ ಪ್ರಕರಣಗಳಲ್ಲಿ ವಿದೇಶಿ ಆರೋಪಿಗಳಿಗೆ ಯಾವ ಮೂಲಗಳಿಂದ ಮಾದಕ ವಸ್ತುಗಳ ಸರಬರಾಜಾಗುತ್ತಿರುವ ಬಗ್ಗೆ ಸಂಪೂರ್ಣ ಮಾಹಿತಿ ಸಂಗ್ರಹಿಸಲು ಸೂಚಿಸಲಾಗಿದ್ದು, ಇಂತಹ ಕೃತ್ಯಗಳಲ್ಲಿ ತೊಡಗಿರುವವರನ್ನು ದಸ್ತಗಿರಿ ಮಾಡಿ ಅವರುಗಳ ಪಾಸ್‌ಪೋರ್ಟ್‌ಗಳನ್ನು ಮುಟ್ಟುಗೋಲು ಹಾಕಿಕೊಂಡು ಕಾನೂನಿನ ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ.<br>7. ವಿದೇಶಿಯರ ವಾಸದ ಬಗ್ಗೆ ಮಾಹಿತಿಯನ್ನು ಸಂಬಂಧಪಟ್ಟ ಪೊಲೀಸ್ ಠಾಣೆಗಳಿಗೆ ಒದಗಿಸುವಂತೆ ಈಗಾಗಲೇ ಸುತ್ತೋಲೆಗಳನ್ನು ಹೊರಡಿಸಲಾಗಿದೆ. ವಿಶೇಷ ಕಾರ್ಯಾಚರಣೆಗಳನ್ನು ನಡೆಸಿ ಇಂತಹ ಕೃತ್ಯವೆಸಗುವಂತಹವರ ವಿರುದ್ಧ ಕಠಿಣ ಕಾನೂನಿನ ರೀತ್ಯಾ ಕ್ರಮ ಕೈಗೊಳ್ಳಲಾಗುತ್ತಿದೆ.<br>8. ಮಾದಕ ವಸ್ತುಗಳ ವ್ಯಸನಿಗಳನ್ನು ಗುರುತಿಸಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಖಾಂತರ ಡಿ–ಅಡಿಕ್ಷನ್ ಸೆಂಟರ್‌ಗಳಿಗೆ ಸೇರಿಸಲು ಕ್ರಮ ವಹಿಸಲಾಗುತ್ತಿದೆ.<br>9. ಪದೇ ಪದೇ ಇಂತಹ ಕೃತ್ಯಗಳಲ್ಲಿ ತೊಡಗುವ ಡ್ರಗ್ ಪೆಡ್ಲರ್ಸ್‌ಗಳ ವಿರುದ್ಧ "Prevention of Illicit Traffic in Narcotics Drugs & Psychotropic Substances" Act, 1988ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ.<br>10. ಠಾಣಾ ಸರಹದ್ದುಗಳಲ್ಲಿ ಹೊಯ್ಸಳ, ಚೀತಾ, ಅಧಿಕಾರಿ ಮತ್ತು ಸಿಬ್ಬಂದಿಗಳು ಗಸ್ತಿನಲ್ಲಿರುವ ಸಮಯದಲ್ಲಿ ಶಾಲಾ–ಕಾಲೇಜುಗಳ ಬಳಿ ಸೂಕ್ಷ್ಮವಾಗಿ ಗಮನಿಸಿ ಅಪರಿಚಿತ ವ್ಯಕ್ತಿಗಳ ಮಾಹಿತಿ ಸಂಗ್ರಹಿಸುವಂತೆ ಸೂಚಿಸಲಾಗಿದೆ. ಮಾದಕ ದ್ರವ್ಯ ಪದಾರ್ಥಗಳ ವಹಿವಾಟನ್ನು ತಡೆಗಟ್ಟಲು, ಪತ್ತೆಮಾಡಲು ಹಾಗೂ ಹದಿಹರೆಯದ ಯುವಕ ಮತ್ತು ಯುವತಿಯರನ್ನು ಇಂತಹ ದುಶ್ಚಟಗಳಿಂದ ತಡೆಗಟ್ಟುವ ಸಲುವಾಗಿ ಎಲ್ಲಾ ರೀತಿಯ ಸಾಧ್ಯವಿರುವ ಪ್ರಯತ್ನಗಳನ್ನು ಮಾಡಲಾಗುತ್ತಿದೆ.<br>11. ಕೊರಿಯರ್ಸ್/ಪೋಸ್ಟ್ ಮತ್ತು ಡಾರ್ಕ್‌ವೆಬ್ ಮೂಲಕ ಮಾದಕ ವಸ್ತುಗಳನ್ನು ಖರೀದಿಸುವವರ ಬಗ್ಗೆ ನಿಗಾವಹಿಸಿ ಕ್ರಮಜರುಗಿಸಲಾಗುತ್ತಿದೆ.<br>12. ರಾಜ್ಯದಲ್ಲಿ 43 ಸೈಬರ್ ಎಕಾನಾಮಿಕ್ & ನಾರ್ಕೋಟಿಕ್ ಪೊಲೀಸ್ ಠಾಣೆ (CEN Police Station) ಸ್ಥಾಪಿತವಾಗಿದ್ದು, ಸದರಿ ಠಾಣೆಯು ಮಾದಕ ವಸ್ತುಗಳ ಚಟುವಟಿಕೆ ಕುರಿತು ನಿರಂತರವಾಗಿ ಮಾಹಿತಿಯನ್ನು ಕಲೆ ಹಾಕಿ ಪತ್ತೆ ಮಾಡುವಲ್ಲಿ ಕಾರ್ಯನಿರ್ವಹಿಸುತ್ತಿದೆ. |

| | | |
|---|---|---|
| ಇ) | ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವವರ ವಿರುದ್ಧ ಇದುವರೆಗೆ ಸರಕಾರ ಕೈಗೊಂಡಿರುವ ಕ್ರಮಗಳೇನು; | ಡ್ರಗ್ಸ್ ಮಾರಾಟ ದಂಧೆಯಲ್ಲಿ ಭಾಗಿಯಾಗಿರುವವರ ವಿರುದ್ಧ ಎನ್.ಡಿ.ಪಿ.ಎಸ್. ಕಾಯ್ದೆ, 1985ರ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು, ಕಾನೂನು ಕ್ರಮವನ್ನು ಜರುಗಿಸಲಾಗುತ್ತಿದೆ. ತನಿಖೆ ಪೂರ್ಣಗೊಂಡ ನಂತರ ಸಂಬಂಧಿಸಿದ ನ್ಯಾಯಾಲಯದಲ್ಲಿ ಆರೋಪಿಗಳ ವಿರುದ್ಧ ದೋಷಾರೋಪಣಾ ಪತ್ರ ಸಲ್ಲಿಸಲಾಗುತ್ತಿದೆ. |
| ಈ) | ಕಾಲೇಜುಗಳ ವಿದ್ಯಾರ್ಥಿಗಳನ್ನೇ ಗುರಿಯಾಗಿಸಿ ಅವರುಗಳನ್ನು ಡ್ರಗ್ಸ್ ಜಾಲಕ್ಕೆ ಸೆಳೆಯುತ್ತಿರುವ ಹಲವಾರು ಪ್ರಕರಣಗಳು ಕಂಡು ಬಂದಿದ್ದು, ಸದರಿ ಪ್ರಕರಣಗಳಲ್ಲಿ ಸರ್ಕಾರ ಏನು ಕ್ರಮ ಕೈಗೊಂಡಿದೆ? | ಕಾಲೇಜು ವಿದ್ಯಾರ್ಥಿಗಳು ಡ್ರಗ್ಸ್ ಜಾಲಕ್ಕೆ ಸೆಳೆಯುವುದನ್ನು ತಡೆಗಟ್ಟಲು ಮಾದಕ ದ್ರವ್ಯದ ಸೇವನೆಯಿಂದ ಆಗುವ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಶಾಲಾ-ಕಾಲೇಜುಗಳಲ್ಲಿ ಮಾದಕ ವಸ್ತುಗಳ ಕುರಿತು ಜಾಗೃತಿ ಕಾರ್ಯಾಗಾರವನ್ನು ಮತ್ತು ಉಪನ್ಯಾಸ /ಸೆಮಿನಾರ್‌ಗಳನ್ನು ಆಯೋಜಿಸಿ ಅರಿವು ಮೂಡಿಸಲಾಗುತ್ತಿದೆ.<br><br>ರಾಜ್ಯದ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ರಾತ್ರಿ ಕ್ಲಬ್, ಪಬ್, ರೆಸ್ಟೋರೆಂಟ್‌ಗಳಿಗೆ ಅನಿರೀಕ್ಷಿತ ದಾಳಿ ನಡೆಸಿ ಪರಿಶೀಲಿಸಲಾಗುತ್ತಿದ್ದು, ಯಾವುದೇ ಕಾನೂನು ಬಾಹಿರ ಕೃತ್ಯಗಳು ಕಂಡು ಬಂದಲ್ಲಿ ಕಾನೂನು ಕ್ರಮಕೈಗೊಳ್ಳಲಾಗುತ್ತಿದೆ ಹಾಗೂ ಮಾದಕ ವಸ್ತುಗಳ ಸೇವನೆ ಮಾಡುವವರ ವಿರುದ್ಧವೂ NDPS Act, 1985ರ ಅಡಿ ಪ್ರಕರಣ ದಾಖಲಿಸಿ ಕ್ರಮ ಜರುಗಿಸಲಾಗುತ್ತಿದೆ. |

ಒಇ 17 ಪಿಎನ್‌ಡಿ 2023(ಇ)

(ಡಾ: ಜಿ.ಪರಮೇಶ್ವರ)
ಗೃಹ ಸಚಿವರು